ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ.:ಸಿ7(2)ಪ್ರಾಶಿಅ:ಶುಲ್ಕ :30/2020-21 ದಿನಾಂಕ:19-02-2021

**: : ಸುತ್ತೋಲೆ : :**

ವಿಷಯ: ರಾಜ್ಯದ ಶಾಲೆಗಳಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ 2020-21ನೇ ಸಾಲಿನ ದಾಖಲಾತಿ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ: 1. ಈ ಕಛೇರಿ ಸಮಪತ್ರದ ಸುತ್ತೋಲೆ ದಿನಾಂಕ:05.09.2020 & 08-10-2020 ಮತ್ತು 11-11-2020.

2. ಸರ್ಕಾರದ ಆದೇಶ ಸಂಖ್ಯೆ: ಇಪಿ 33 ಪಿಜಿಸಿ 2021, ದಿನಾಂಕ:29-01-2021.
3. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಕಛೇರಿ ಟಿಪ್ಪಣಿ ಸಂಖ್ಯೆ:ಪ್ರಾ.ಪ್ರೌ.ಸ.ಸ/ 1149/2020-21, ದಿನಾಂಕ:06-02-2021.
4. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಇವರು ದಿನಾಂಕ:19-02-2021 ರಂದು ಚರ್ಚಿಸಿ ಸೂಚಿಸಿದಂತೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ ಎಲ್ಲ ವಿದ್ಯಾರ್ಥಿಗಳ ದಾಖಲಾಗಿರುವುದನ್ನು ಖಚಿತಪಡಿಸಬೇಕಾಗಿರುವುದರಿಂದ ಪ್ರಸಕ್ತ 2020-21ನೇ ಸಾಲಿಗೆ ವಿದ್ಯಾರ್ಥಿಗಳ ದಾಖಲಾತಿಯನ್ನು ದಿನಾಂಕ:30.09.2020ರೊಳಗೆ ಪೂರ್ಣಗೊಳಿಸಲು ಎಲ್ಲಾ ಶಾಲೆಗಳಿಗೆ ಉಲ್ಲೇಖದ ಸುತ್ತೋಲೆಯಂತೆ ತಿಳಿಸಲಾಗಿತ್ತು ಆದರೆ ಕೋವಿಡ್-19ರ ಹಿನ್ನೆಲೆಯಲ್ಲಿ ಸದರಿ ದಿನಾಂಕವನ್ನು 16-10-2020 ರವರೆಗೆ ಮುಂದುವರೆದು 13-11-2020 ರವರೆಗೆ ಮತ್ತೊಮ್ಮೆ ವಿಸ್ತರಣೆ ಮಾಡಲಾಗಿತ್ತು.

ಕೋವಿಡ್-19ರ ಹಿನ್ನೆಲೆಯಲ್ಲಿ ಇದುವರೆವಿಗೂ ಶಾಲೆಗಳಿಗೆ ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ದಾಖಲಾತಿಯಾಗಿರುವುದಿಲ್ಲ. ಆದುದರಿಂದ 2020-21ನೇ ಶೈಕ್ಷಣಿಕ ಸಾಲಿಗೆ ಉಲ್ಲೇಖ(3)ರಂತೆ **ದಿನಾಂಕ:30-03-2021 ರವರೆಗೆ ದಾಖಲಾತಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ**. ಉಳಿದಂತೆ ಉಲ್ಲೇಖ(1) ಮತ್ತು (2)ರ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

**ಗೆ:**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ವಿಭಾಗ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಇವರು ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸುತ್ತೋಲೆಯನ್ನು ತಲುಪಿಸುವುದು)

**ಪ್ರತಿಯನ್ನು ಮಾಹಿತಿಗಾಗಿ**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
4. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
5. ಕಛೇರಿ ಪ್ರತಿ.